**ನಾಳೆ (ಏಪ್ರಿಲ್ 16) ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಸ್ಮರಣೆ**

ಬೆಂಗಳೂರು: ನಾಳೆ ಎಂದರೆ ಏಪ್ರಿಲ್ 16ರ ಮಂಗಳವಾರ ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಸಂವಿಧಾನ ಶಿಲ್ಪಿ, ಸಮತೆಯ ಸೇನಾನಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಸ್ಮರಣೆಯ ಕಾರ್ಯಕ್ರಮವನ್ನು ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಏರ್ಪಡಿಸಲಾಗಿದೆ. ಭಾರತದ ಸಂವಿಧಾನದ ಶಿಲ್ಪಿ ಎಂದೇ ಕರೆಸಿ ಕೊಂಡಿರುವ ಡಾ.ಬಿ.ಆರ್.ಅಂಬೇಡ್ಕರ್ ಅವರು ಸಾಮಾಜಿಕ ನ್ಯಾಯವನ್ನು ಸಾಧಿಸಲು ವಿಶೇಷ ಪ್ರಯತ್ನ ಮಾಡಿದವರು . ಅವರ ಪ್ರಯತ್ನದಿಂದಲೇ ಶತ ಶತಮಾನಗಳಿಂದ ಮೂಕರಾದವರು ಮಾತನ್ನು ಪಡೆದರು ಎನ್ನುವುದಕ್ಕೆ ಚಾರಿತ್ರಿಕ ಮಹತ್ವವಿದೆ. 'ಮೂಕ ನಾಯಕ' ಎಂಬ ಪತ್ರಿಕೆಯನ್ನೂ ನಡೆಸುತ್ತಿದ್ದ ಅವರು ಬಡವರ ಮೊಕದ್ದಮೆಗಳನ್ನು ಯಾವುದೇ ಶುಲ್ಕ ಪಡೆಯದೆ ನಡೆಸುತ್ತಿದ್ದರು. ಸ್ವಾತಂತ್ರ್ಯ ನಂತರ ಭಾರತದ ಮೊಟ್ಟ ಮೊದಲ ಕಾನೂನು ಸಚಿವರಾದ ಅಂಬೇಡ್ಕರ್ ಸಾಮಾಜಿಕ ಭದ್ರತೆ ಯೋಜನೆಗಳು ರೂಪಿತವಾಗುವಲ್ಲಿ ಮುಖ್ಯ ಪಾತ್ರ ವಹಿಸಿದ್ದರು. ಕೊನೆಯವರೆಗೂ ಕ್ರಿಯಾಶೀಲರಾಗಿದ್ದ ಅಂಬೇಡ್ಕರ್ ಅವರ ಸ್ಮರಣೆ ನಮಗೆ ಸದಾ ಚೈತನ್ಯವನ್ನು ನೀಡಬಲ್ಲಂತಹದು. ಸಾಮಾಜಿಕ ಮತ್ತು ಸಾಂಸ್ಕೃತಿಕ ಕಾಳಜಿಯನ್ನು ಹೊಂದಿರುವ ಕನ್ನಡ ಸಾಹಿತ್ಯ ಪರಿಷತ್ತು ಈ ಹಿನ್ನೆಲೆಯಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಸ್ಮರಣೆಯನ್ನು ಏರ್ಪಡಿಸಿದೆ.

ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ.ಮಹೇಶ ಜೋಶಿಯವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಲಿದ್ದು ಬೆಂಗಳೂರು ನಗರ ವಿಶ್ವವಿದ್ಯಾಲಯದ ಬಾಬಾ ಸಾಹೇಬ ಡಾ.ಬಿ.ಆರ್.ಅಂಬೇಡ್ಕರ್ ಅಧ್ಯಯನ ಮತ್ತು ಸಂಶೋಧನಾ ಕೇಂದ್ರದ ನಿರ್ದೇಶಕರೂ ಮತ್ತು ಪ್ರಾಧ್ಯಾಪಕರೂ ಆದ ಪ್ರೊ.ಸಿ.ಬಿ.ಹೊನ್ನಸಿದ್ದಾರ್ಥ ಅವರು 'ಡಾ.ಬಿ.ಆರ್.ಅಂಬೇಡ್ಕರ್ ಅವರ ಜೀವನ ಮತ್ತು ಕೊಡುಗೆಗಳ' ಕುರಿತು ವಿಶೇಷ ಉಪನ್ಯಾಸವನ್ನು ನೀಡಲಿದ್ದು, ಕರ್ನಾಟಕ ಪೋಲೀಸ್ ಇಲಾಖೆಯ ವಿಶ್ರಾಂತ ಹೆಚ್ಚುವರಿ ಮಹಾನಿರ್ದೇಶಕರಾದ ಡಾ.ಸುಭಾಷ್ ಭರಣಿಯವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಸಾಂಸ್ಕೃತಿಕವಾಗಿ ಬಹಳ ಮುಖ್ಯವಾದ ಈ ಕಾರ್ಯಕ್ರಮದ ವಿವರಗಳನ್ನು ಸಾರ್ವಜನಿಕ ಹಿತದೃಷ್ಟಿಯಿಂದ ನಿಮ್ಮ ಪತ್ರಿಕೆಯಲ್ಲಿ ಪ್ರಕಟಿಸುವುದರ ಜೊತೆಗೆ ಕಾರ್ಯಕ್ರಮಕ್ಕೆ ನಿಮ್ಮ ವರದಿಗಾರರು ಮತ್ತು ಛಾಯಾಗ್ರಾಹಕರನ್ನು ಕಳುಹಿಸ ಬೇಕಾಗಿ ವಿನಂತಿ.

ಎನ್.ಎಸ್.ಶ್ರೀಧರ ಮೂರ್ತಿ

ಸಂಚಾಲಕರು, ಪ್ರಕಟಣಾ ವಿಭಾಗ, ಕನ್ನಡ ಸಾಹಿತ್ಯ ಪರಿಷತ್ತು